# ಫ್ಯಾಕ್ಸಲ್ಲಿ ರಾಜೀನಾಮೆ ಪಡೆಯಲು ನಾನು ಅಂಚೆ ಇಲಾಖೆಯಲ್ಲಿ ಇಲ್ಲ: ಸ್ಪೀಕರ್ ಕಿಡಿ

## ವಿಧಾನಸಭೆಗೆ ಘನತೆ ಇದೆ, ದನಗಳ ರೀತಿ ವರ್ತಿಸಬಾರದು | ರಮೇಶ್ ಜಾರಕಿಹೊಳಿಗೆ ಚಾಟಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 3/7/19

ಫ್ಯಾಕ್ಸ್ ಮೂಲಕ ರಾಜೀನಾಮೆ ತೆಗೆದುಕೊಳ್ಳಲು ನಾನು ಪೋಸ್ಟಲ್ ಡಿಪಾರ್ಟ್‌ಮೆಂಟ್‌ನಲ್ಲಿ ಇಲ್ಲ ಎಂದು ಶಾಸಕ ರಮೇಶ್ ಜಾರಕಿಹೊಳಿ ವಿರುದ್ಧ ವಿಧಾನಸಭೆ ಅಧ್ಯಕ್ಷ ರಮೇಶ್ ಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಕಾಂಗ್ರೆಸ್‌ನ ಅತೃಪ್ತ ಶಾಸಕ ರಮೇಶ್ ಜಾರಕಿಹೊಳಿ ಫ್ಯಾಕ್ಸ್ ಮೂಲಕ ರಾಜೀನಾಮೆ ಸಲ್ಲಿಸಿದ್ದೇನೆ ಎಂದು ನೀಡಿರುವ ಹೇಳಿಕೆಗೆ ಸ್ಪೀಕರ್ ಈ ಪ್ರತಿಕ್ರಿಯೆ ನೀಡಿದರು. ವಿಧಾನಸೌಧದಲ್ಲಿ ಮಂಗಳವಾರ ಮಾತನಾಡಿದ ಅವರು, ನಾನು ಪೋಸ್ಟಲ್ ಡಿಪಾರ್ಟ್‌ಮೆಂಟ್‌ನಲ್ಲಿ ಇಲ್ಲ. ಯಾರ ದೊಡ್ಡಸ್ತಿಕೆಯೂ ನಡೆಯುವುದಿಲ್ಲ, ನಿಯಮಗಳು ಮಾತ್ರ ಇಲ್ಲಿ ನಡೆಯುತ್ತವೆ. ಎಲ್ಲರಿಗಿಂತ ಸಂವಿಧಾನ ದೊಡ್ಡದು ಎಂದು ಹೇಳಿದರು.

ವಿಧಾನಸಭೆಗೆ ತನ್ನದೇ ಆದ ಘನತೆ, ಗೌರವ ಇದೆ. ದನಗಳ ರೀತಿ ವರ್ತಿಸುವುದಕ್ಕೆ ಆಗುವುದಿಲ್ಲ. ಮಾಧ್ಯಮಗಳ ಮುಂದೆ ಮಾತನಾಡುವ ವೇಳೆ ಎಚ್ಚರಿಕೆಯಿಂದ ಮಾತನಾಡಬೇಕು. ನಾನು ತಲೆಬಾಗುವುದು ಸಂವಿಧಾನದ ಆಶಯಕ್ಕೆ ಮಾತ್ರ. ಜನಪ್ರತಿನಿಧಿಗಳಿಗೆ ಮಾತನಾಡುವಾಗ ಅರಿವಿರಬೇಕು. ಚುನಾಯಿತರಾದ ಜನಪ್ರತಿನಿಧಿಗಳನ್ನು ಜನರು ವಾಪಸ್ ಕರೆಸಿಕೊಳ್ಳುವುದಕ್ಕೆ ಅವಕಾಶ ಇಲ್ಲ. ಜನರ ಭಾವನೆಗಳಿಗೆ ಗೌರವ ನೀಡಬೇಕು ಎಂದು ಕಿಡಿಕಾರಿದರು.

### ಆನಂದಸಿಂಗ್ ರಾಜೀನಾಮೆ ಪತ್ರ ಮಾತ್ರ ಬಂದಿದೆ

**ಕೋಲಾರ:** ಶಾಸಕ ಆನಂದ್ ಸಿಂಗ್ ರಾಜೀನಾಮೆ ಪತ್ರ ಸಿಕ್ಕಿದೆ, ಆ ಪತ್ರವನ್ನು ನಾನು ನನ್ನ ಕಚೇರಿಗೆ ಕಳುಹಿಸಿದ್ದೇನೆ. ಆದರೆ ರಮೇಶ್ ಜಾರಕಿಹೊಳಿ ಕೊಟ್ಟಿರುವ ರಾಜೀನಾಮೆ ಪತ್ರ ನನಗೆ ಬಂದಿಲ್ಲ ಎಂದು ಸ್ಪೀಕರ್ ರಮೇಶ್ ಕುಮಾರ್ ತಿಳಿಸಿದರು. ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಸುದ್ದಿಗಾರರ ಜತೆಗೆ ಮಾತನಾಡಿ, ನಾನು ಕಚೇರಿಗೆ ಹೋದಾಗ ನಿಯಮಾನುಸಾರ ಕ್ರಮ ಕೈಗೊಳ್ಳುವೆ. ನನಗೆ ಯಾರೂ ಟೈಮ್ ಕೇಳಿಲ್ಲ, ಅವರು ಬರೋದೂ ಗೊತ್ತಿಲ್ಲ. ರಮೇಶ್ ಜಾರಕಿಹೊಳಿ ಏನಾದರು ಹೇಳಿಕೆ ಕೊಟ್ಟಿದ್ರೆ ಅದು ಅವರಿಗೆ ಬಿಟ್ಟಿದ್ದು ಎಂದು ಖಾರವಾಗಿ ಪ್ರತಿಕ್ರಿಸಿದರು.

### ಜನಾಭಿಪ್ರಾಯ ಪಡೆದು ಮುಂದಿನ ಕ್ರಮ: ಸ್ಪೀಕರ್

**ಬೆಂಗಳೂರು:** ಕಾಂಗ್ರೆಸ್ ಶಾಸಕ ಆನಂದ್ ಸಿಂಗ್ ಸಲ್ಲಿಸಿರುವ ರಾಜೀನಾಮೆ ಪತ್ರವನ್ನು ಪರಿಶೀಲನೆ ನಡೆಸಿದ ವಿಧಾನಸಭೆ ಅಧ್ಯಕ್ಷ ರಮೇಶ್ ಕುಮಾರ್ ಕ್ಷೇತ್ರದ ಸಾರ್ವಜನಿಕರ ಅಭಿಪ್ರಾಯ ಪಡೆದು ಮುಂದಿನ ಕ್ರಮ ಕೈಗೊಳ್ಳಲು ಮುಂದಾಗಿದ್ದಾರೆ.

ಇದೇ ವೇಳೆ ಫ್ಯಾಕ್ಸ್ ಮೂಲಕ ರಾಜೀನಾಮೆ ಕಳುಹಿಸಲಾಗಿದೆ ಎಂಬ ಬಂಡಾಯ ಶಾಸಕ ರಮೇಶ್ ಜಾರಕಿಹೊಳಿ ಹೇಳಿಕೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಮಂಗಳವಾರ ತಮ್ಮ ಕಚೇರಿಗೆ ಆಗಮಿಸಿದ ಅವರು, ಆನಂದ್ ಸಿಂಗ್ ರಾಜೀನಾಮೆ ಪತ್ರವನ್ನು ತರಿಸಿಕೊಂಡು ಪರಿಶೀಲಿಸಿ ಮುಂದಿನ ಪ್ರಕ್ರಿಯೆಯನ್ನು ಆರಂಭಿಸಿದರು.

### ಗೌರವಯುತವಾಗಿ ಸಾಯಬೇಕು: ರಮೇಶ್ ಕುಮಾರ್

**ಕೋಲಾರ:** ರಾಜ್ಯ ರಾಜಕಾರಣ ಈಗ ಅಧಃಪಥನದತ್ತ ಸಾಗಿದೆ, ಇಲ್ಲಿ ರಾಜಕೀಯಕ್ಕೆ ಬೆಲೆ ಇಲ್ಲದಂತಾಗಿದೆ ಎಂದು ಸ್ಪೀಕರ್ ರಮೇಶ್ ಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇಲ್ಲಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯ ರಾಜಕಾರಣ ಅಧಃಪತನದತ್ತ ಸಾಗಿದ್ದು, ಸಾರ್ವಜನಿಕ ಜೀವನದಲ್ಲಿರುವವರಿಗೆ ಮೂರು ಕಾಸಿನ ಬೆಲೆಯೂ ಇಲ್ಲದಂತಾಗಿದೆ. ನಾನು ಗೌರವಯುತವಾಗಿ ಸಾಯಬೇಕೆಂದುಕೊಂಡಿದ್ದೇನೆ. ಜನತೆಗೆ ಒಳ್ಳೆಯ ಕೆಲಸ ಮಾಡಬೇಕೆಂಬುದೇ ನನ್ನ ಆಸೆ ಎಂದರು.